ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 63 ಜಿಪಸ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 07-04-2016

# ಸುತ್ತೋಲೆ

ವಿಷಯ: ಗ್ರಾಮ ಉದಯ ಸೇ ಭಾರತ ಉದಯ್ ಅಭಿಯಾನ ಮತ್ತು ರಾಷ್ಟ್ರೀಯ ಪಂಚಾಯತ್ ದಿವಸ್ ಆಚರಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸಮ ಸಂಖ್ಯೆಯ ಸುತ್ತೋಲೆ, ದಿನಾಂಕ:21-03-2016.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 115 ಜಿಪಸ 2016, ದಿನಾಂಕ: 31-03-2016.
3. ಸರ್ಕಾರದ ಸಮ ಸಂಖ್ಯೆಯ ಸುತ್ತೋಲೆ, ದಿನಾಂಕ:05-04-2016.

****

**'ಗ್ರಾಮ ಉದಯಿ ಸೇ ಭಾರತ ಉದಯ್ ಅಭಿಯಾನ'** ಮತ್ತು **'ರಾಷ್ಟ್ರೀಯ ಪಂಚಾಯತ್ ದಿವಸ್'** ಆಚರಿಸುವ ಬಗ್ಗೆ ಈಗಾಗಲೇ ಉಲ್ಲೇಖದ ಸುತ್ತೋಲೆಗಳಲ್ಲಿ ಹಲವಾರು ನಿರ್ದೇಶನಗಳನ್ನು ನೀಡಲಾಗಿದೆ. ಉಲ್ಲೇಖದ ಎಲ್ಲಾ ಸುತ್ತೋಲೆಗಳಲ್ಲಿ ತಿಳಿಸಿರುವ ಅಂಶಗಳನ್ನು ಒಟ್ಟುಗೂಡಿಸಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಗಿನಂತೆ ನಿರ್ದಿಷ್ಟಪಡಿಸಿದೆ.

## ಪಂಚಾಯತಿ ಅಭಿವೃದ್ಧಿ ಅಧಿಕಾರಿ:

1. ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಸಭೆ ನಡೆಯುವ ಬಗ್ಗೆ ಸಾಕಷ್ಟು ಸ್ಥಳೀಯವಾಗಿ ಪ್ರಚಾರಗಳನ್ನು ಕೈಗೊಳ್ಳತಕ್ಕದ್ದು.
2. ಗ್ರಾಮ ಪಂಚಾಯತಿಯಲ್ಲಿರುವ ವಾರ್ಡ್ ಸಂಖ್ಯೆ ಮತ್ತು ಗ್ರಾಮಗಳ ಸಂಖ್ಯೆಯ ಆಧಾರದ ಮೇಲೆ ಗ್ರಾಮ ಸಭಾ ವೇಳಾಪಟ್ಟಿಯನ್ನು ಕೂಡಲೇ ಹೊರಡಿಸತಕ್ಕದ್ದು.
3. ಗ್ರಾಮ ಸಭೆಯ ವೇಳಾಪಟ್ಟಿಯನ್ನು ಹೊರಡಿಸುವಾಗ ಈಗಾಗಲೇ ಉಲ್ಲೇಖದ ಸುತ್ತೋಲೆಗಳಲ್ಲಿ ಸೂಚಿಸಿರುವಂತಹ ಕಾರ್ಯಸೂಚಿಗಳನ್ನು ತಪ್ಪದೇ ಪಾಲಿಸುವುದು.
4. ಉಲ್ಲೇಖ(2)ರ ಸುತ್ತೋಲೆಯಲ್ಲಿ ತಿಳಿಸಿರುವಂತೆ ಪ್ರತಿ ಗ್ರಾಮ ಸಭೆಗಳಲ್ಲಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಜಯಂತಿಯ ಪ್ರಯುಕ್ತ "ರಾಷ್ಟ್ರೀಯ ಸಮರಸ್ಥ ದಿವಸ್" ಆಗಿ ಆಚರಿಸುವುದು ಮತ್ತು ಸದರಿ ಸುತ್ತೋಲೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಕಾರ್ಯಸೂಚಿಯಲ್ಲಿ ಅನುಷ್ಠಾನ ಮಾಡುವುದು.
5. ಉಲ್ಲೇಖ(3)ರ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕಾರ್ಯಸೂಚಿಯಲ್ಲಿ ರೈತರಿಗೆ ಸಂಬಂಧಪಟ್ಟಂತಹ ವಿಚಾರಗಳು ಮತ್ತು ಅನುಷ್ಠಾನ ಮಾಡುತ್ತಿರುವ ಯೋಜನೆಗಳನ್ನು ಸೇರಿಸಿಕೊಂಡು ಕೃಷಿ ಇಲಾಖೆಯ ಸಹಭಾಗಿತ್ವದಲ್ಲಿ ರೈತರಿಗೆ ತಿಳುವಳಿಕೆಯನ್ನು ನೀಡತಕ್ಕದ್ದು.
6. ಮಹಿಳೆಯರಿಗೆ ಸಂಬಂಧಪಟ್ಟಂತಹ ವಿಚಾರಗಳನ್ನು ಆದ್ಯತೆಯ ಮೇರೆಗೆ ಕಾರ್ಯಸೂಚಿಯಲ್ಲಿ ಅಳವಡಿಸಿಕೊಂಡು, ಗ್ರಾಮ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸುವುದು.
7. ಗ್ರಾಮ ಪಂಚಾಯತಿ ಅಭಿವೃದ್ಧಿ ಯೋಜನೆಯನ್ನು ಚರ್ಚಿಸಿ, ಗ್ರಾಮ ಸಭೆಯಲ್ಲಿ ಅಂತಿಮಗೊಳಿಸುವುದು.

8. ಉಲ್ಲೇಖ(3)ರ ಕಾರ್ಯಸೂಚಿಯಲ್ಲಿ ತಿಳಿಸಿರುವಂತೆ ಸಾಮಾಜಿಕ, ಆರ್ಥಿಕ ಮತ್ತು ಜಾತಿ ಗಣತಿಯ ಆಧಾರದ ಮೇಲೆ ತಯಾರಿಸಿರುವ ವಸತಿ ರಹಿತರ ಪಟ್ಟಿಯನ್ನು ತಯಾರಿಸಿ, ಸಭೆಯಲ್ಲಿ ಮಂಡಿಸಿ ಇತ್ತೀಚಿನ ಹಂತವನ್ನು ಗ್ರಾಮ ಸಭೆಯಲ್ಲಿ ನಿರ್ಧರಿಸಿ, ಆಧ್ಯತೀಕರಣಗೊಂಡಂತಹ ಪಟ್ಟಿಯನ್ನು ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)ಗೆ ಬಳಸುವುದು.
9. ದಿನಾಂಕ: 24-04-2016ರಂದು ಗ್ರಾಮ ಪಂಚಾಯತಿ ಕೇಂದ್ರ ಸ್ಥಾನದಲ್ಲಿ ಗ್ರಾಮ ಸಭೆಗಳನ್ನು ಏರ್ಪಡಿಸುವುದು. ಸದರಿ ದಿನದಂದು **"ರಾಷ್ಟ್ರೀಯ ಪಂಚಾಯತ್ ರಾಜ್ ದಿವಸ್"** ಆಗಿರುವುದರಿಂದ, ಮಾನ್ಯ ಪ್ರಧಾನ ಮಂತ್ರಿಗಳು ಜೆಮ್‌ಶೆಡ್‌ಪುರದಿಂದ ಮಾಡುವಂತಹ ಭಾಷಣವನ್ನು ನೇರವಾಗಿ ಗ್ರಾಮ ಸಭೆಯಲ್ಲಿ ಭಿತ್ತರಿಸಲು ಎಲ್ಲಾ ಅಗತ್ಯ ಏರ್ಪಾಡುಗಳನ್ನು ಮಾಡುವುದು. ಈಗಾಗಲೇ ಗ್ರಾಮ ಸಭೆ ಪೂರ್ಣಗೊಂಡಂತಹ ಗ್ರಾಮಗಳಲ್ಲಿಯೂ ಸಹ ಸ್ಥಳೀಯವಾಗಿ ಒಂದು ಸ್ಥಳವನ್ನು ಗುರುತಿಸಿ, ಅಂತಹ ಸ್ಥಳದಲ್ಲಿ ಟಿ.ವಿ ಮುಖಾಂತರ ಅಥವಾ ರೇಡಿಯೋ ಮುಖಾಂತರ ಮಾನ್ಯ ಪ್ರಧಾನ ಮಂತ್ರಿಗಳ ಭಾಷಣವನ್ನು ಭಿತ್ತರಿಸಲು ಅಗತ್ಯ ಕ್ರಮ ಕೈಗೊಳ್ಳುವುದು. ಈ ಬಗ್ಗೆ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ರವರು ನೀಡುವ ನಿರ್ದೇಶನವನ್ನು ತಪ್ಪದೇ ಪಾಲಿಸುವುದು.
10. **"ರಾಷ್ಟ್ರೀಯ ಪಂಚಾಯತ್ ರಾಜ್ ದಿವಸ್"** ಆಚರಣೆಯ ಸಲುವಾಗಿ ಕೇಂದ್ರ ಸರ್ಕಾರವು ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಲು, ಪ್ರತಿಜ್ಞಾ ವಿಧಿಯನ್ನು ನೀಡಿರುತ್ತದೆ. ಅದರ ಕನ್ನಡ ಅನುವಾದವನ್ನು ಈಗಾಗಲೇ ಉಲ್ಲೇಖ(3)ರ ಸುತ್ತೋಲೆಯ ಜೊತೆ ಕಳುಹಿಸಲಾಗಿದೆ. **"ರಾಷ್ಟ್ರೀಯ ಸಮ್ರಸ್ಥ ದಿವಸ್"**ದ ಪ್ರತಿಜ್ಞಾ ವಿಧಿಯ ಪ್ರತಿಯನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಪಡೆದು ಇದರೊಂದಿಗೆ ಲಗತ್ತಿಸಿದೆ. ಗ್ರಾಮ ಸಭೆಯಲ್ಲಿ ಪ್ರತಿಜ್ಞಾ ವಿಧಿಯನ್ನು ಅಧ್ಯಕ್ಷತೆಯನ್ನು ವಹಿಸುವ ವ್ಯಕ್ತಿಯು ಭೋದಿಸತಕ್ಕದ್ದು. ಇತರರೆಲ್ಲರೂ ಸ್ವೀಕರಿಸತಕ್ಕದ್ದು.
11. ಗ್ರಾಮ ಸಭೆಗಳ ವಿಡಿಯೋ ಮತ್ತು ಛಾಯಾಚಿತ್ರವನ್ನು ಹಾಗೂ ನಡವಳಿಗಳನ್ನು ಕಡ್ಡಾಯವಾಗಿ ಪಂಚತಂತ್ರ ಗಣಕ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡತಕ್ಕದ್ದು ಮತ್ತು ಇ-ಮೇಲ್ ವಿಳಾಸ directorpr2015@gmail.com ಗೆ ಗ್ರಾಮ ಸಭೆಯಾದ ಮರುದಿನ ತಪ್ಪದೇ ಕಳುಹಿಸತಕ್ಕದ್ದು.

**ಕಾರ್ಯನಿರ್ವಾಹಕ ಅಧಿಕಾರಿ:**

1. ವಾರ್ಡ್ ಮತ್ತು ಗ್ರಾಮ ಸಭೆಗಳ ಯಶಸ್ವಿ ಆಯೋಜನೆಯ ಮೇಲುಸ್ತುವಾರಿ ಮಾಡಲು ತಾಲ್ಲೂಕು ಮಟ್ಟದಲ್ಲಿ ಗ್ರಾಮ ಪಂಚಾಯತಿವಾರು ನೋಡಲ್ ಅಧಿಕಾರಿಗಳನ್ನು ನೇಮಿಸುವುದು.
2. ಗ್ರಾಮ ಪಂಚಾಯತಿಗಳು ವಾರ್ಡ್ ಮತ್ತು ಗ್ರಾಮ ಸಭೆಗಳ ವೇಳಾ ಪಟ್ಟಿಯನ್ನು ಪ್ರಕಟಿಸಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
3. ಗ್ರಾಮ ಪಂಚಾಯತಿಗಳು ವಾರ್ಡ್ ಮತ್ತು ಗ್ರಾಮ ಸಭೆಗಳ ಆಯೋಜನೆ ಬಗ್ಗೆ ವ್ಯಾಪಕ ಪ್ರಚಾರಗಳನ್ನು ಕೈಗೊಂಡಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
4. ವಾರ್ಡ್ ಮತ್ತು ಗ್ರಾಮ ಸಭೆಗಳ ಯಶಸ್ವಿ ಆಯೋಜನೆಯಲ್ಲಿ ಉಲ್ಲೇಖದ ಸುತ್ತೋಲೆಗಳಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಗ್ರಾಮ ಪಂಚಾಯತಿಗಳು ಅನುಸರಿಸುವ ಬಗ್ಗೆ ಎಲ್ಲಾ ಅಗತ್ಯ ಮಾರ್ಗದರ್ಶನಗಳನ್ನು ಮಾಡುವುದು.
5. ಗ್ರಾಮ ಪಂಚಾಯತಿಗಳು ಗ್ರಾಮ ಸಭೆಗಳ ವಿಡಿಯೋ, ಛಾಯಾಚಿತ್ರಗಳು ಹಾಗೂ ನಡವಳಿಗಳನ್ನು ಪಂಚತಂತ್ರ ಗಣಕ ತಂತ್ರಾಂಶಕ್ಕೆ ಅಪ್‌ಲೋಡ್ ಮಾಡಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ:

1. ವಾರ್ಡ್ ಮತ್ತು ಗ್ರಾಮ ಸಭೆಗಳ ಯಶಸ್ವಿ ಆಯೋಜನೆಯ ಮೇಲುಸ್ತುವಾರಿ ಮಾಡಲು ಜಿಲ್ಲಾ ಮಟ್ಟದಲ್ಲಿ ತಾಲ್ಲೂಕುವಾರು ನೋಡಲ್ ಅಧಿಕಾರಿಗಳನ್ನು ನೇಮಿಸುವುದು.
2. ಗ್ರಾಮ ಪಂಚಾಯತಿಗಳು ವಾರ್ಡ್ ಮತ್ತು ಗ್ರಾಮ ಸಭೆಗಳ ವೇಳಾ ಪಟ್ಟಿಯನ್ನು ಪ್ರಕಟಿಸಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
3. ಗ್ರಾಮ ಪಂಚಾಯತಿಗಳು ವಾರ್ಡ್ ಮತ್ತು ಗ್ರಾಮ ಸಭೆಗಳ ಆಯೋಜನೆ ಬಗ್ಗೆ ವ್ಯಾಪಕ ಪ್ರಚಾರಗಳನ್ನು ಕೈಗೊಂಡಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
4. ವಾರ್ಡ್ ಮತ್ತು ಗ್ರಾಮ ಸಭೆಗಳ ಯಶಸ್ವಿ ಆಯೋಜನೆಯಲ್ಲಿ ಉಲ್ಲೇಖಿದ ಸುತ್ತೋಲೆಗಳಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಗ್ರಾಮ ಪಂಚಾಯತಿಗಳು ಅನುಸರಿಸುವ ಬಗ್ಗೆ ಎಲ್ಲಾ ಅಗತ್ಯ ಮಾರ್ಗದರ್ಶನಗಳನ್ನು ಮಾಡುವುದು.
5. ಗ್ರಾಮ ಪಂಚಾಯತಿಗಳು ಗ್ರಾಮ ಸಭೆಗಳ ವಿಡಿಯೋ, ಛಾಯಾಚಿತ್ರಗಳು ಹಾಗೂ ನಡವಳಿಗಳನ್ನು ಪಂಚತಂತ್ರ ಗಣಕ ತಂತ್ರಾಂಶಕ್ಕೆ ಅಪ್‌ಲೋಡ್ ಮಾಡಿರುವ ಬಗ್ಗೆ ಖಾತರಿಪಡಿಸಿಕೊಳ್ಳುವುದು.
6. ಇದುವರೆಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದಿನಾಂಕ: 11–04–2016ರೊಳಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸತಕ್ಕದ್ದು.

(ಪಿ. ಶಿವಶಂಕರ್)
ನಿರ್ದೇಶಕರು(ಪಂ.ರಾಜ್–2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
3. ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು,
4. ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು/ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.

5. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿ.
6. ನಿರ್ದೇಶಕರು (ಪಂ.ರಾಜ್–1) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
7. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
8. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

# ಪ್ರತಿಜ್ಞಾ ವಿಧಿ

## ರಾಷ್ಟ್ರೀಯ ಸಮ್ರಸ್ಟ್ ದಿವಸ್

ಏಪ್ರಿಲ್ 14, 2016

---

ಭಾರತೀಯರಾದ ನಾವು, ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ 125ನೇ ಜನ್ಮ ದಿನಾಚರಣೆ ನಿಮಿತ್ಯ ಏಪ್ರಿಲ್ 14ನ್ನು **"ರಾಷ್ಟ್ರೀಯ ಸಮ್ರಸ್ಟ್ ದಿವಸ್"** ಆಗಿ ಆಚರಿಸುತ್ತಿದ್ದೇವೆ. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಜನ್ಮ ದಿನಾಂಕವಾದ ಏಪ್ರಿಲ್ 14 ರಿಂದ **'ಪಂಚಾಯತ್ ರಾಜ್ ದಿವಸ್'** ಆದ ಏಪ್ರಿಲ್ 24 ರವರೆಗೆ **'ಗ್ರಾಮ ಉದಯಿ ಸೇ ಭಾರತ ಉದಯ್'** ಅಭಿಯಾನ ಆಚರಿಸುತ್ತಿದ್ದೇವೆ.

ಈ ಸಂದರ್ಭದಲ್ಲಿ ನಾವು ಸಾಮಾಜಿಕ ಸಾಮರಸ್ಯ ಮತ್ತು ಸಮಾನತೆಯನ್ನು ಕಾಪಾಡಿಕೊಳ್ಳುವುದರ ಮೂಲಕ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ ಕನಸಾದಂತಹ ಸಮ ಸಮಾಜವನ್ನು ನಿರ್ಮಾಣ ಮಾಡಲು ಪಣ ತೊಡುತ್ತಿದ್ದೇವೆ.